# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2203
2. ಮಾನ್ಯ ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 31.03.2020
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ | ರಾಯಚೂರು ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ನಿರ್ಮಾಣ ಹಂತದಲ್ಲಿ ಇರುವ 'ರೈತರ ಭವನ'ವನ್ನು ಸ್ಥಾಪಿಸಲು ಯಾವ ವರ್ಷದಲ್ಲಿ ಮಂಜೂರು ಮಾಡಲಾಗಿತ್ತು; ಮಂಜೂರಾಗಿರುವ ಅನುದಾನ ಎಷ್ಟು; ಖರ್ಚು ಮಾಡಿರುವ ಅನುದಾನ ಎಷ್ಟು; ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | 2014-15ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಡಿ ರಾಯಚೂರು ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ರೈತ ಭವನ ನಿರ್ಮಾಣ ಕಾಮಗಾರಿಯನ್ನು ಕೈಗೊಂಡು, ರೂ.455.00 ಲಕ್ಷಗಳ ವೆಚ್ಚದಲ್ಲಿ ದಿನಾಂಕ 05.08.2018 ರಂದು ಪೂರ್ಣಗೊಳಿಸಲಾಗಿರುತ್ತದೆ.<br><br>ರೂ.2.75 ಲಕ್ಷಗಳ ವಿದ್ಯುತ್ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ |
| ಆ | ರಾಯಚೂರು ಹಾಗೂ ಮಾನ್ವಿ ಕೃಷಿ ಉತ್ಪನ್ನ ಮಾರುಕಟ್ಟೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | **ರಾಯಚೂರು ಕೃಷಿ ಉತ್ಪನ್ನ ಮಾರುಕಟ್ಟೆಯನ್ನು ಈ ಕೆಳಕಂಡಂತೆ ಅಭಿವೃದ್ಧಿಪಡಿಸಲಾಗಿದೆ.**<br><br>1) 2015-16ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಕ್ಲೀನಿಂಗ್, ಗ್ರೇಡಿಂಗ್ ಘಟಕ ನಿರ್ಮಾಣ ಕಾಮಗಾರಿಯನ್ನು ರೂ.200.00 ಲಕ್ಷಗಳ ವೆಚ್ಚದಲ್ಲಿ ಮತ್ತು ಹತ್ತಿ ಮಾರುಕಟ್ಟೆ ಪ್ರಾಂಗಣದಲ್ಲಿ ಕುರಿ ಮತ್ತು ಮೇಕೆ ಸಂತೆ ಅಭಿವೃದ್ಧಿ ಕಾಮಗಾರಿಯನ್ನು ರೂ.50.00 ಲಕ್ಷಗಳ ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.<br><br>3) 2017-18ನೇ ಸಾಲಿನಲ್ಲಿ Warehouse Infrastructural Fund 2013-14ರ ಯೋಜನೆಯಡಿ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೂ. 170.00 ಲಕ್ಷಗಳ ವೆಚ್ಚದಲ್ಲಿ 2000 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ನಿರ್ಮಾಣ ಕಾಮಗಾರಿಯನ್ನು ಕೈಗೊಂಡು, ಪೂರ್ಣಗೊಳಿಸಲಾಗಿದೆ.<br><br>4) 2018-19ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಡಿ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು 852.00 ರೂ.ಗಳ ಲಕ್ಷಗಳಲ್ಲಿ ಕೈಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br><br>5) 2020-21ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಡಿ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೂ.732.30 ಲಕ್ಷಗಳ ವೆಚ್ಚದಲ್ಲಿ ವಿವಿಧ ಅಭಿವೃದ್ಧಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. |

| | | |
|---|---|---|
| | | ಮಾನ್ವಿ ಕೃಷಿ ಉತ್ಪನ್ನ ಮಾರುಕಟ್ಟೆಯನ್ನು ಈ ಕೆಳಕಂಡಂತೆ ಅಭಿವೃದ್ಧಿಪಡಿಸಲಾಗಿದೆ.<br><br>1) 2014-15ನೇ ಸಾಲಿನ ಡಬ್ಲ್ಯೂ.ಐ.ಎಫ್ (Warehouse Infrastructural Fund) ಯೋಜನೆಯಡಿ ಜಾನುವಾರು ಸಂತೆಯಲ್ಲಿ ಮೂಲಭೂತಸೌಕರ್ಯ ಮತ್ತು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ನೀರು ಸರಬರಾಜು ಮಾಡುವ ಕಾಮಗಾರಿಯನ್ನು ರೂ.100.00 ಲಕ್ಷಗಳ ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.<br><br>2) 2015-16ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ 1000 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ನಿರ್ಮಾಣ ಕಾಮಗಾರಿಯನ್ನು ರೂ.100.00 ಲಕ್ಷಗಳ ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.<br><br>3) 2017-18ನೇ ಸಾಲಿನಲ್ಲಿ ಡಬ್ಲ್ಯೂ.ಐ.ಎಫ್(Warehouse Infrastructural Fund)-2013-14ರ ಯೋಜನೆಯಡಿ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೂ. 150.00 ಲಕ್ಷಗಳ ವೆಚ್ಚದಲ್ಲಿ ಮುಚ್ಚು ಹರಾಜುಕಟ್ಟೆ ಕಾಮಗಾರಿಯನ್ನು ಕೈಗೊಂಡು, ಪೂರ್ಣಗೊಳಿಸಲಾಗಿದೆ.<br><br>4) 2018-19ನೇ ಸಾಲಿನ ಡಬ್ಲ್ಯೂ.ಐ.ಎಫ್(Warehouse Infrastructural Fund)-2014-15ರ ಯೋಜನೆಯಡಿ ಕ್ಯಾಟಲ್ ಮಾರುಕಟ್ಟೆ ಪ್ರಾಂಗಣದಲ್ಲಿ ರೂ. 104.00 ಲಕ್ಷಗಳ ವೆಚ್ಚದಲ್ಲಿ 1000 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ನಿರ್ಮಾಣ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿದೆ. |

ಸಂಖ್ಯೆ: ಸಇ 162 ಎಂಆರ್ಇ 2020

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು